# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 489 (751) |
| 2. ಸದಸ್ಯರ ಹೆಸರು | : | ಶ್ರೀ ಎನ್.ಎಸ್. ಭೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| 3. ಉತ್ತರಿಸುವ ದಿನಾಂಕ | : | 10.03.2020 |
| 4. ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಯಚೂರು ನಗರದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸ್ಥಾಪನೆಯ ಅನುಕೂಲಕ್ಕಾಗಿ ಲ್ಯಾಂಡ್ ಬ್ಯಾಂಕ್ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ರಾಯಚೂರು ಜಿಲ್ಲೆ ಮತ್ತು ತಾಲ್ಲೂಕು, ಕುರುಬದೊಡ್ಡಿ, ಚಂದ್ರಬಂಡಿ ಮತ್ತು ಸಿಂಗನೊಡಿ ಗ್ರಾಮಗಳ ಒಟ್ಟು 690-13 ಎಕರೆ ಜಮೀನನ್ನು ಕೈಗಾರಿಕಾ ಪ್ರದೇಶ ಸ್ಥಾಪನೆಗಾಗಿ ಗುರುತಿಸಲಾಗಿದೆ |
| ಆ. | ರಾಯಚೂರು ನಗರದಲ್ಲಿರುವ ಇಂಡಸ್ಟ್ರಿಯಲ್ ಗ್ರೋತ್ ಸೆಂಟರ್‌ನಲ್ಲಿ ಮೂಲ ಸೌಲಭ್ಯಗಳನ್ನು ಹೆಚ್ಚಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ರಾಯಚೂರು ಗ್ರೋಥ್ ಸೆಂಟರ್ ಕೈಗಾರಿಕಾ ಪ್ರದೇಶವನ್ನು 1745-31 ಎಕರೆ ಪ್ರದೇಶದಲ್ಲಿ ಅಭಿವೃದ್ಧಿಪಡಿಸಲಾಗಿದೆ. ಈ ಪ್ರದೇಶಕ್ಕೆ ಮೂಲಸೌಕರ್ಯ ಒದಗಿಸಲು ಸುಮಾರು 15 ಕಿ.ಮೀ ರಸ್ತೆ, ಚರಂಡಿ, ಬೀದಿದೀಪ ಹಾಗೂ ನೀರು ಸರಬರಾಜು, ಪೈಪ್ ಲೈನ್ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆ.<br>ಉಳಿದಂತೆ ಮೂಲಭೂತ ಸೌಕರ್ಯಗಳನ್ನು ಹೆಚ್ಚಿಸಲು 4 ಕಿ.ಮೀ ರಸ್ತೆ ಹಾಗೂ ಸೋಲಾರ್ ಬೀದಿದೀಪಗಳನ್ನು ಅಳವಡಿಸುವ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು.<br>ರಸ್ತೆ ಬದಿಯಲ್ಲಿ ನಿಲ್ಲಿಸುವ ವಾಹನಗಳ ತೊಂದರೆಗಳನ್ನು ನಿವಾರಿಸಲು 20-00 ಎಕರೆ ಜಮೀನು ಮೆ: ದೇವರಾಜ್ ಟ್ರಕ್ ಟರ್ಮಿನಲ್‌ಗೆ ಹಂಚಿಕೆಯಾಗಿದ್ದು, ಸದರಿ ಹಂಚಿಕೆದಾರರು ಪ್ರಾರಂಭಿಕ ಠೇವಣಿ ಮೊತ್ತ ಪಾವತಿಸಿದ್ದು, ಬಾಕಿ ಮೊತ್ತವನ್ನು ಪಾವತಿಸಿದ ನಂತರ ಸ್ವಾಧೀನ ಪತ್ರವನ್ನು ನೀಡಲಾಗುವುದು.<br>5-00 ಎಕರೆ ಪ್ರದೇಶದಲ್ಲಿ ಸಿ.ಇ.ಟಿ.ಪಿ. ಯನ್ನು ನಿರ್ಮಿಸಲು ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಇವರಿಗೆ ಹಸ್ತಾಂತರಿಸಲಾಗಿದ್ದು, ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಕ್ರಮವಹಿಸಬೇಕಾಗಿದೆ. |

ಸಂಖ್ಯೆ: ಸಿಐ 38 ಐಎಪಿ(ಇ) 2020

(ಜಗದೀಶ್ ಶೆಟ್ಟರ್)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು